# ಕರ್ನಾಟಕ ಸರ್ಕಾರದ ನಡಾವಳಿಗಳು

ವಿಷಯ : M/s Tumkur Renewable Energy India Private Limited ಇವರಿಗೆ ಚಿತ್ರದುರ್ಗ ಜಿಲ್ಲೆಯ, ಚಿತ್ರದುರ್ಗ ತಾಲ್ಲೂಕಿನ ವಿವಿಧ ಗ್ರಾಮಗಳಲ್ಲಿ 10.5 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು ಹಂಚಿಕೆ ಮಾಡುವ ಕುರಿತು.

**ಓದಲಾಗಿದೆ :** 1) ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ ಇವರ ಪತ್ರ ಸಂಖ್ಯೆ:KREDL/ 08/ TREIPL-10.5 MW/Madanayakanahalli/Chitradurga/F-06 (2023)/0209, ದಿನಾಂಕ:19.01.2023.

2) ದಿನಾಂಕ:21.01.2023 ರಂದು ನಡೆದ ಹಂಚಿಕೆ ಸಮಿತಿ ಸಭೆಯ ನಡವಳಿ.

3) ಮಾನ್ಯ ಉಚ್ಚ ನ್ಯಾಯಾಲಯದ ರಿಟ್ ಅರ್ಜಿ ಸಂಖ್ಯೆ:15113/2022 (GM-RES)

ಸಂ. 555
ದಿನಾಂಕ 9/2/23

**ಪ್ರಸ್ತಾವನೆ :-**

ಮೇಲೆ ಓದಲಾದ (1)ರ ಪತ್ರದಲ್ಲಿ ವ್ಯವಸ್ಥಾಪಕ ನಿರ್ದೇಶಕರು, ಕೆ.ಆರ್.ಇ.ಡಿ.ಎಲ್.ಇವರು ಸರ್ಕಾರಕ್ಕೆ ಸಲ್ಲಿಸಿರುವ ಪ್ರಸ್ತಾವನೆಯಲ್ಲಿ M/s Tumkur Renewable Energy India Private Limited ಇವರಿಗೆ ಚಿತ್ರದುರ್ಗ ಜಿಲ್ಲೆಯ, ಚಿತ್ರದುರ್ಗ ತಾಲ್ಲೂಕಿನ ತಾಲ್ಲೂಕಿನ ಮಾದನಾಯಕನ ಹಳ್ಳಿ, ಹುಣಸೇಕಟ್ಟೆ ಮತ್ತು ಕಲ್ಲೇನಹಳ್ಳಿ ಗ್ರಾಮಗಳಲ್ಲಿ 10.5 ಮೆ.ವ್ಯಾ ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯ ಕುರಿತು ವಿಸ್ತೃತ ಯೋಜನಾ ವರದಿಯನ್ನು ತಯಾರಿಸಿ, ಕೆ.ಆರ್.ಇ.ಡಿ.ಎಲ್. ನಿಯಮಿತಕ್ಕೆ ಸಲ್ಲಿಸಿರುವುದಾಗಿ ಹಾಗೂ ಸದರಿ ಯೋಜನೆಯಿಂದ ಉತ್ಪಾದನೆಯಾಗುವ ವಿದ್ಯುತ್ತನ್ನು ವೀಲಿಂಗ್ ಮತ್ತು ಬ್ಯಾಂಕಿಂಗ್ ಮುಖಾಂತರ ಸ್ವಂತ ಬಳಕೆಗೆ/ಮೂರನೇ ವ್ಯಕ್ತಿಗೆ ಮಾರಾಟ ಮಾಡುವ ವರ್ಗದಡಿ ಪ್ರತಿ ವಿಂಡ್ ಟರ್ಬೈನ್ ಗೆ 4 ಎಕರೆಯಂತೆ Footprint basis ಲೆಕ್ಕೀಕರಿಸಿ, ಜಮೀನುಗಳನ್ನು ಉಪಯೋಗಿಸುವುದು ಮತ್ತು ಪವನ ವಿದ್ಯುತ್ ಘಟಕಗಳ ಅಂತರವನ್ನು MNRE ಸುತ್ತೋಲೆ/ಮಾರ್ಗಸೂಚಿಯಂತೆ ಅಳವಡಿಸುವಂತೆ ಷರತ್ತುಗಳನ್ನು ವಿಧಿಸಿ, ಹಂಚಿಕೆ ನೀಡುವಂತೆ ಕೋರಿರುವುದಾಗಿ ತಿಳಿಸಿರುತ್ತಾರೆ.

ಮುಂದುವರೆದು, M/s Tumkur Renewable Energy India Private Limited ಇವರ ಪ್ರಸ್ತಾವನೆಯನ್ನು ಪರಿಶೀಲಿಸಲಾಗಿ, ಸದರಿಯವರು ಕೋರಿರುವ ಸ್ಥಳವು ಈಗಾಗಲೇ M/s Aikyam Holdings Private Limited ಇವರು 4 ಸಂಖ್ಯೆಯ 2 ಮೆ.ವ್ಯಾ. ಸಾಮರ್ಥ್ಯದ ವಿಂಡ್ ಟರ್ಬೈನ್‌ಗಳನ್ನು ಅಳವಡಿಸಿ, ಅನುಷ್ಠಾನಗೊಳಿಸಿರುವ ಪ್ರದೇಶದಲ್ಲಿ ಬರುತ್ತಿರುವುದರಿಂದ, M/s Aikyam Holdings Private Limited ಇವರ ವಿಂಡ್ ಟರ್ಬೈನ್‌ಗಳಿಗೆ ಯಾವುದೇ ತೊಂದರೆಯಾಗದಂತೆ ಷರತ್ತು ವಿಧಿಸಿ ಹಾಗೂ MNRE ಇವರ ಮಾರ್ಗಸೂಚಿಯಂತೆ M/s Tumkur Renewable Energy India Private Limited ಇವರು 10.5 ಮೆ.ವ್ಯಾ ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು ಹಂಚಿಕೆ ಮಾಡಬಹುದಾಗಿದೆ.

AGM(W)

GM (Tech) KREDL

M/s Tumkur Renewable Energy India Private Limited ಇವರು 10.5 ಮೆ.ವ್ಯಾ. ಸಾಮರ್ಥ್ಯಕ್ಕೆ 2100 ಕಿ.ವ್ಯಾ. ಸಾಮರ್ಥ್ಯದ 5 ವಿಂಡ್ ಟರ್ಬೈನ್‌ಗಳನ್ನು ಅಳವಡಿಸುತ್ತಿದ್ದು, ಪ್ರತಿ ಟರ್ಬೈನ್‌ಗೆ 04 ಎಕರೆಯಂತೆ ಲೆಕ್ಕೀಕರಿಸಿ ಒಟ್ಟು 20 ಎಕರೆ (5 Nos of WTG x 4 Acres = 20 Acres) ಜಮೀನನ್ನು ಮಾತ್ರ ಟೋಪೋಶೀಟ್ ಸಂಖ್ಯೆ:57 B/7 ರಲ್ಲಿ ಉಪಯೋಗಿಸಿಕೊಳ್ಳಬಹುದಾಗಿದೆ ಹಾಗೂ ಸದರಿಯವರು ಕೋರಿರುವ ಸ್ಥಳವು ಹಂಚಿಕೆಗೆ ಲಭ್ಯವಿರುತ್ತದೆ.

MD KREDL

M/s Tumkur Renewable Energy India Private Limited ಕಂಪನಿಯು ಹೊಸ ಇಂಧನ ನೀತಿ 2022-27ರಂತೆ 10.5 ಮೆ.ವ್ಯಾ. ಸಾಮರ್ಥ್ಯದ ಯೋಜನೆಗೆ ಅರ್ಜಿ ಹಾಗೂ 30% ಸಂಸ್ಕರಣಾ ಶುಲ್ಕವನ್ನು ಪಾವತಿಸಿರುತ್ತಾರೆ. ಬಾಕಿ ಉಳಿದ 70% ಸಂಸ್ಕರಣಾ ಶುಲ್ಕವನ್ನು ಹಂಚಿಕೆ ಆದೇಶ ಹೊರಡಿಸಿದ ನಂತರ ಕೆ.ಆರ್.ಇ.ಡಿ.ಎಲ್. ನಿಯಮಿತದೊಂದಿಗೆ ಒಡಂಬಡಿಕೆ ಮಾಡಿಕೊಳ್ಳುವ ಪೂರ್ವದಲ್ಲಿ ಸಂದಾಯ ಮಾಡಬೇಕಾಗಿರುತ್ತದೆ.

Wind Section
Inward No. 1638
Date 15/2/23
Sig

AFA 16/2/23

....2